ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ದಿನಾಂಕ : **30 MAY 2022**

ಸಂಖ್ಯೆ: ಕವಿಪ್ರನಿನಿ/ಬಿ**14/526/2019-20**
ಲಗತ್ತು:- ಸರ್ಕಾರದ ಸುತ್ತೋಲೆ ಪ್ರತಿ

## ಸುತ್ತೋಲೆ

ವಿಷಯ :- ಕವಿಪ್ರನಿನಿ ಕಚೇರಿಗಳಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲಿ ಶೇಕಡ 33 ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ :- ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 137ಎಇಎಸ್2022, ದಿನಾಂಕ: 19-05-2022.

********

ಉಲ್ಲೇಖದಲ್ಲಿ ನಮೂದಿಸಲಾದ ಸರ್ಕಾರದ ಸುತ್ತೋಲೆಯಲ್ಲಿ ಹೊರ ಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳನ್ನು ಮಹಿಳೆಯರು ಕೂಡ ಸಮರ್ಥರಾಗಿ ನಿರ್ವಹಿಸಬಲ್ಲವರಾಗಿರುವುದರಿಂದ ರಾಜ್ಯ ಸರ್ಕಾರದ ಕಚೇರಿಗಳಲ್ಲಿ/ಸರ್ಕಾರಿ ವಲಯದ ಅಂಗ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳಲ್ಲಿ ಹಾಗೂ ಹುದ್ದೆಗಳಲ್ಲಿ ಶೇಕಡ 33 ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವಂತೆ ಸೂಚನೆ ನೀಡಿರುವುದರಿಂದ, ಕವಿಪ್ರನಿನಿಯಲ್ಲಿ ಡಾಟಾ ಎಂಟ್ರಿ ಅಪರೇಟರ್, ಮತ್ತು ಇತರೆ ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಪಡೆಯುವಾಗ ಟೆಂಡರ್ ಪ್ರಕಟಣೆಯಲ್ಲಿ ಮತ್ತು ಹೊರಗುತ್ತಿಗೆ ಎಜನ್ಸಿಗಳೊಂದಿಗೆ ಮಾಡಿಕೊಳ್ಳುವ ಒಪ್ಪಂದದಲ್ಲಿ ಕಡ್ಡಾಯವಾಗಿ ಶೇಕಡ 33 ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವ ಷರತ್ತನ್ನು ಸೇರಿಸಿ ಟೆಂಡರ್ ಅಹ್ವಾನಿಸುವಂತೆ ಸಂಬಂಧಿಸಿದ ಎಲ್ಲಾ ನಿಗಮದ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಸರ್ಕಾರದ ಉಲ್ಲೇಖಿತ ಸುತ್ತೋಲೆ ಪ್ರತಿಯನ್ನು ಮಾಹಿತಿಗಾಗಿ ಲಗತ್ತಿಸಲಾಗಿದೆ.

ನಿರ್ದೇಶಕರು (ಆ ಮತ್ತು ಮಾ.ಸಂ)
ಕವಿಪ್ರನಿನಿ

ಪ್ರತಿಯನ್ನು ಮಾಹಿತಿಗಾಗಿ

1) ಎಲ್ಲಾ ವ್ಯವಸ್ಥಾಪಕ ನಿರ್ದೇಶಕರುಗಳು, ಬೆಸ್ಕಾಂ/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ/ಸೆಸ್ಕ್
2) ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
3) ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ)/(ತಾಂತ್ರಿಕ),ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
4) ಎಲ್ಲಾ ಆರ್ಥಿಕ ಸಲಹೆಗಾರರು/ಆರ್ಥಿಕ ಸಲಹೆಗಾರರು(ಆ. ಪ), ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು
5) ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
6) ಹಿರಿಯ ಅಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು,(ಪ್ರಸರಣ)/(ಹಣಕಾಸು)/ಆ ಮತ್ತು ಮಾ.ಸಂ) ಕವಿಪ್ರನಿನಿ. ಕಾವೇರಿಭವನ, ಬೆಂಗಳೂರು.
7) ಎಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್ (ವಿ)/ ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
8) ಎಲ್ಲಾ ಲೆಕ್ಕಾಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು (ಆ.ಪ), ಕವಿಪ್ರನಿನಿ.
9) ಅಧೀಕ್ಷಕ ಇಂಜಿನಿಯರ್(ವಿ) (ಐ.ಟಿ)ಕವಿಪ್ರನಿನಿ ಅಂತರ್ಜಾಲದಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
10) ಮುಖ್ಯ ಕಡತಕ್ಕೆ

F-1700628

**ಕರ್ನಾಟಕ ಸರ್ಕಾರ**

**ಸಂಖ್ಯೆ: ಸಿಆಸುಇ 137 ಎಇಎಸ್ 2022**

**ಕರ್ನಾಟಕ ಸರ್ಕಾರ ಸಚಿವಾಲಯ,**
**ಕೊ.ಸಂ.454, ಬಹುಮಹಡಿ ಕಟ್ಟಡ,**
**ಬೆಂಗಳೂರು, ದಿನಾಂಕ: 19.05.2022**

## <u>ಸುತ್ತೋಲೆ</u>

ವಿಷಯ: ರಾಜ್ಯ ಸರ್ಕಾರದ ಕಛೇರಿಗಳಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲಿ (Outsourcing) ಶೇ.33ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವ ಬಗ್ಗೆ ಸೂಚನೆಗಳು.

*****

ರಾಜ್ಯ ಸರ್ಕಾರದ ಕಚೇರಿಗಳಲ್ಲಿನ ವಾಹನ ಚಾಲಕರು, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾ ಸಿಬ್ಬಂದಿ, ಗ್ರೂಪ್ ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ (Outsourcing) ಭರ್ತಿ ಮಾಡಿಕೊಳ್ಳುವುದು ಸರ್ಕಾರದ ಇತ್ತೀಚಿನ ಅಂಗೀಕೃತ ಕಾರ್ಯನೀತಿಯಾಗಿರುತ್ತದೆ. ಮಹಿಳೆಯರ ಸಬಲೀಕರಣ ಮತ್ತು ಅವರಿಗೆ ಸಾಮಾಜಿಕ ನ್ಯಾಯ ಮತ್ತು ಸಮಾನ ಉದ್ಯೋಗಾವಕಾಶಗಳನ್ನು ಒದಗಿಸುವ ದೃಷ್ಟಿಯಿಂದ ರಾಜ್ಯ ಸರ್ಕಾರವು 1996ರಲ್ಲಿಯೇ ರಾಜ್ಯ ಸಿವಿಲ್ ಸೇವೆಗಳಲ್ಲಿ ಶೇ.30ರಷ್ಟು ನೇರ ನೇಮಕಾತಿ ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಗೆ ಮೀಸಲಾಗಿರಿಸಿದೆ.

ಹೊರಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳನ್ನು ಮಹಿಳೆಯರು ಕೂಡ ಸಮರ್ಥರಾಗಿ ನಿರ್ವಹಿಸಬಲ್ಲವರಾಗಿರುತ್ತಾರೆ. ಆದಕಾರಣ ರಾಜ್ಯ ಸರ್ಕಾರದ ಕಚೇರಿಗಳಲ್ಲಿ ಹೊರಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳಲ್ಲಿ ಹಾಗೂ ಹುದ್ದೆಗಳಲ್ಲಿ ಶೇ.33ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವಂತೆ ಸರ್ಕಾರದ ಎಲ್ಲಾ ಇಲಾಖೆಗಳಿಗೆ ಈ ಮೂಲಕ ಸೂಚನೆಗಳನ್ನು ನೀಡಲಾಗಿದೆ. ಡಾಟಾ ಎಂಟ್ರಿ ಆಪರೇಟರ್, ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಪಡೆಯುವ ಟೆಂಡರ್ ಪ್ರಕಟಣೆಯಲ್ಲಿಮತ್ತು ಹೊರಗುತ್ತಿಗೆ ಏಜನ್ಸಿಗಳೊಂದಿಗೆ ಮಾಡಿಕೊಳ್ಳಲಾಗುವ ಒಪ್ಪಂದದಲ್ಲಿ ಈ ಅಂಶವನ್ನು ಸೇರಿಸಲು ಸಂಬಂಧಪಟ್ಟ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಗಳು ಕ್ರಮವಹಿಸುವುದು.

ಮೇಲಿನ ಸೂಚನೆಗಳನ್ನು ಸ್ವಾಯತ್ತ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಇನ್ನಿತರೆ ಸರ್ಕಾರಿ ವಲಯದ ಅಂಗ ಸಂಸ್ಥೆಗಳು ಕೂಡ ಪಾಲಿಸತಕ್ಕದ್ದು. ಈ ಸಂಬಂಧ ಸರ್ಕಾರದ ಎಲ್ಲಾ ಆಡಳಿತ ಇಲಾಖೆಗಳ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಕ್ಷೇತ್ರ ಇಲಾಖೆಗಳು ಮತ್ತು ಸರ್ಕಾರದ ಅಂಗಸಂಸ್ಥೆಗಳಿಗೆ ಅಗತ್ಯ ಸೂಚನೆಗಳನ್ನು ನೀಡುವುದು. ಈ ಸೂಚನೆಗಳನ್ನು ಕಾರ್ಯಗತಗೊಳಿಸುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ, ಸಂಬಂಧಪಟ್ಟ ಇಲಾಖಾ ಕಾರ್ಯದರ್ಶಿಗಳು ಅವುಗಳನ್ನು ಪರಿಹರಿಸತಕ್ಕದ್ದು.

**(ಪಿ. ರವಿ ಕುಮಾರ್),**
ಸರ್ಕಾರದ ಮುಖ್ಯ ಕಾರ್ಯದರ್ಶಿ,

165
ಬೆಂಗಳೂರು-9
21/05/22

**ಇವರಿಗೆ:**

ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಗಳು.
4. ಸರ್ಕಾರದ ಎಲ್ಲಾ ಇಲಾಖೆಗಳ ಮುಖ್ಯಸ್ಥರು/ಮುಖ್ಯಸ್ಥರುಗಳು, ರಾಜ್ಯ ಸರ್ಕಾರದ ವ್ಯಾಪ್ತಿಯ ಎಲ್ಲಾ ಸ್ವಾಯತ್ತ ಸಂಸ್ಥೆಗಳು,ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಇನ್ನಿತರ ಸರ್ಕಾರಿ ವಲಯದ ಅಂಗ ಸಂಸ್ಥೆಗಳು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.